# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 730 |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 18.08.2025 |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ರಾಜ್ಯಾದಾದ್ಯಂತ ಸಾರ್ವಜನಿಕ ವಿತರಣಾ ವ್ಯವಸ್ಥೆಯ (ಪಿಡಿಎಸ್) ಅಡಿಯಲ್ಲಿ ಅಕ್ರಮವಾಗಿ ಅಕ್ಕಿ ಸಾಗಣೆ ಹಾಗೂ ಅಕ್ರಮ ಸಂಗ್ರಹಣೆಗೆ ಸಂಬಂಧಿಸಿದಂತೆ ಕಳೆದ ಮೂರು ವರ್ಷಗಳಲ್ಲಿ ಎಷ್ಟು ಪ್ರಕರಣಗಳು ದಾಖಲಾಗಿವೆ; (ಮಾಹಿತಿಯನ್ನು ಒದಗಿಸುವುದು)</td><td>ರಾಜ್ಯಾದ್ಯಂತ ಸಾರ್ವಜನಿಕ ವಿತರಣಾ ವ್ಯವಸ್ಥೆಯ (ಪಿಡಿಎಸ್) ಅಡಿಯಲ್ಲಿ ಅಕ್ರಮವಾಗಿ ಅಕ್ಕಿ ಸಾಗಣೆ ಹಾಗೂ ಅಕ್ರಮ ಸಂಗ್ರಹಣೆಗೆ ಸಂಬಂಧಿಸಿದಂತೆ ಕಳೆದ ಮೂರು ವರ್ಷಗಳಲ್ಲಿ ಈ ಕೆಳಕಂಡಂತೆ ಪ್ರಕರಣಗಳು ದಾಖಲಾಗಿರುತ್ತವೆ.<br><table><tr><th>ಕ್ರ.ಸಂ</th><th>ವರ್ಷ</th><th>ದಾಖಲಾದ ಪ್ರಕರಣಗಳ ಸಂಖ್ಯೆ</th></tr><tr><td>1</td><td>2023-24</td><td>362</td></tr><tr><td>2</td><td>2024-25</td><td>402</td></tr><tr><td>3</td><td>2025-26 (ಜೂನ್-2025ರ ವರೆಗೆ)</td><td>188</td></tr></table></td></tr>
<tr><td>ಆ</td><td>ಕೊಪ್ಪಳ ಜಿಲ್ಲೆಯಲ್ಲಿ ಅಕ್ರಮವಾಗಿ ಪಿಡಿಎಸ್ ಅಕ್ಕಿ ಸಾಗಣೆ ಮಾಡಿದ ಪ್ರಕರಣಗಳ ಸಂಖ್ಯೆ ಎಷ್ಟು; ಅದರಲ್ಲಿ, ಎಷ್ಟು ಪ್ರಕರಣಗಳಿಗೆ ಎಫ್ಐಆರ್ ದಾಖಲಾಗಿದೆ; ಈ ಪ್ರಕರಣಗಳಲ್ಲಿ ಎಷ್ಟು ಜನ ಆರೋಪಿಗಳನ್ನು ಬಂಧಿಸಲಾಗಿದೆ; ಎಷ್ಟು ಪ್ರಕರಣಗಳಲ್ಲಿ ನ್ಯಾಯಾಲಯದ ಮೂಲಕ ಶಿಕ್ಷೆ ವಿಧಿಸಲಾಗಿದೆ; (ಸಂಪೂರ್ಣ ಮಾಹಿತಿಯನ್ನು ಒದಗಿಸುವುದು)</td><td>ಕೊಪ್ಪಳ ಜಿಲ್ಲೆಯಲ್ಲಿ ಕಳೆದ 3 ವರ್ಷಗಳಲ್ಲಿ ಅಕ್ರಮವಾಗಿ ಸಾರ್ವಜನಿಕ ವಿತರಣಾ ಪದ್ಧತಿಯ (PDS) ಅಕ್ಕಿ ಸಾಗಣೆ ಮಾಡಿರುವ ಬಗ್ಗೆ 25 ಪ್ರಕರಣಗಳು ದಾಖಲಾಗಿರುತ್ತವೆ. ಈ ಪೈಕಿ 15 ಪ್ರಕರಣಗಳಲ್ಲಿ ಎಫ್.ಐ.ಆರ್ ದಾಖಲಿಸಲಾಗಿರುತ್ತದೆ ಹಾಗೂ 32 ಆರೋಪಿಗಳನ್ನು ಬಂಧಿಸಲಾಗಿರುತ್ತದೆ.<br>ಈ ಅವಧಿಯಲ್ಲಿ ದಾಖಲಾದ ಪ್ರಕರಣಗಳು ನ್ಯಾಯಾಲಯದಲ್ಲಿ ವಿಚಾರಣಾ ಹಂತದಲ್ಲಿದ್ದು, ಶಿಕ್ಷೆಯು ನ್ಯಾಯಾಲಯದ ಅಂತಿಮ ಆದೇಶಕ್ಕೆ ಒಳಪಟ್ಟಿರುತ್ತದೆ.</td></tr>
</table>

<table>
<tr>
<td>ಇ</td>
<td>ಈ ಅವಧಿಯಲ್ಲಿ ಪೊಲೀಸರು ಅಥವಾ ಆಹಾರ ಇಲಾಖಾಧಿಕಾರಿಗಳು ಜಪ್ತಿ ಮಾಡಿರುವ ಅಕ್ಕಿಯ ಪ್ರಮಾಣ ಎಷ್ಟು ಕ್ವಿಂಟಲ್ ಅಥವಾ ಮೆಟ್ರಿಕ್ ಟನ್‌ನ ಮೌಲ್ಯ ಎಷ್ಟು; (ಮಾಹಿತಿಯನ್ನು ಒದಗಿಸುವುದು)</td>
<td>ಈ ಅವಧಿಯಲ್ಲಿ ಪೊಲೀಸರು ಅಥವಾ ಆಹಾರ ಇಲಾಖಾಧಿಕಾರಿಗಳು ಜಪ್ತಿ ಮಾಡಿರುವ ಅಕ್ಕಿಯ ಪ್ರಮಾಣ ವಿವರ ಈ ಕೆಳಕಂಡಂತಿದೆ.<br><br>
<table>
<tr><th>ಕ್ರ.ಸಂ</th><th>ವರ್ಷ</th><th>ಅಕ್ಕಿಯಪ್ರಮಾಣ (ಕ್ವಿಂಟಾಲ್)</th><th>ಮೌಲ್ಯ ರೂ.ಗಳಲ್ಲಿ</th></tr>
<tr><td>1</td><td>2023-24</td><td>27018.64</td><td>9,18,63,376</td></tr>
<tr><td>2</td><td>2024-25</td><td>12035.65</td><td>3,97,55,912</td></tr>
<tr><td>3</td><td>2025-26 (ಜೂನ್2025ರವರೆಗೆ)</td><td>7924.27</td><td>1,74,76,396</td></tr>
</table></td>
</tr>
<tr>
<td>ಈ</td>
<td>ಪಿಡಿಎಸ್ ಅಡಿಯಲ್ಲಿ ಅಕ್ಕಿಯ ದುರ್ಬಳಕೆಯನ್ನು ತಡೆಗಟ್ಟಲು ಸರ್ಕಾರ ಯಾವ ನಿಗಾ ಕ್ರಮಗಳನ್ನು ತೆಗೆದುಕೊಂಡಿದೆಯೇ; ಭವಿಷ್ಯದಲ್ಲಿ ಇದು ಪುನರಾವರ್ತನೆಯಾಗದಂತೆ ಏನೆಲ್ಲಾ ನವೀನ ತಂತ್ರಜ್ಞಾನ ಅಥವಾ ಕ್ರಮಗಳನ್ನು ಜಾರಿಗೆ ತರಲಾಗುವುದು? (ಮಾಹಿತಿಯನ್ನು ಒದಗಿಸುವುದು)</td>
<td>ಸಾರ್ವಜನಿಕ ವಿತರಣಾ ಪದ್ಧತಿ (PDS) ಅಡಿಯಲ್ಲಿ ಅಕ್ಕಿಯ ದುರ್ಬಳಕೆಯನ್ನು ತಡೆಗಟ್ಟಲು ಈ ಕೆಳಗಿನಂತೆ ಕ್ರಮವಹಿಸಲಾಗುತ್ತಿದೆ.<br><br>
➢ ಆಧಾರ್ ಆಧಾರಿತ ಬಯೋ ಮೆಟ್ರಿಕ್ ಪಡಿತರ ವಿತರಣೆ ವ್ಯವಸ್ಥೆಯನ್ನು ಜಾರಿಗೊಳಿಸಲಾಗಿರುತ್ತದೆ.<br>
➢ ಇಲಾಖೆಯ ಅಧಿಕಾರಿಗಳು ಹಾಗೂ ಕಾರ್ಯನಿರ್ವಾಹಕ ಸಿಬ್ಬಂದಿಗಳಿಗೆ ಕಾಲ ಕಾಲಕ್ಕೆ ಮೇಲ್ವಿಚಾರಣೆ ಮಾಡುವಂತೆ ನಿರ್ದೇಶನ ನೀಡಿ ಅಗತ್ಯ ವಸ್ತುಗಳ ಕಾಯ್ದೆ 1955 ರಡಿ ಕ್ರಿಮಿನಲ್ ಪ್ರಕರಣ ದಾಖಲಿಸಲಾಗಿರುತ್ತದೆ.<br>
➢ ಪಡಿತರ ಚೀಟಿದಾರರು ಪಡಿತರ ಅಕ್ಕಿಯನ್ನು ದುರ್ಬಳಕೆ ಮಾಡಿಕೊಂಡ ಪ್ರಕರಣಗಳು ಕಂಡುಬಂದಲ್ಲಿ ಸದರಿ ಪಡಿತರ ಚೀಟಿಗಳನ್ನು ರದ್ದುಪಡಿಸಿ ಅಂತಹವರ ವಿರುದ್ಧ ನಿಯಾಮಾನುಸಾರ ಸೂಕ್ತ ಕ್ರಮ ಕೈಗೊಳ್ಳಲಾಗುತ್ತಿದೆ.<br>
➢ ನ್ಯಾಯಬೆಲೆ ಅಂಗಡಿ, ತಾಲ್ಲೂಕು, ಜಿಲ್ಲಾ ಹಾಗೂ ರಾಜ್ಯ ಮಟ್ಟದಲ್ಲಿ ಜಾಗೃತಿ ಸಮಿತಿಗಳನ್ನು ರಚಿಸಿ ಪಡಿತರ ವಿತರಣೆಯನ್ನು ಪರಿಶೀಲಿಸಲಾಗುತ್ತಿದೆ.<br>
➢ ಪ್ರತಿ ಮಾಹೆ ನ್ಯಾಯಬೆಲೆ ಅಂಗಡಿ ಮಟ್ಟದಲ್ಲಿ ಆಹಾರ ಅದಾಲತ್ ಗಳನ್ನು ನಡೆಸಿ ಪಡಿತರ ಚೀಟಿದಾರರಿಗೆ ಪಡಿತರ ವಿತರಣೆ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದೆ.<br>
➢ ರಾಜ್ಯ ಮಟ್ಟದಲ್ಲಿ ಆಹಾರ ಜಾಗೃತ ಧಳ ರಚಿಸಿ ಅಕ್ರಮಗಳ ಬಗ್ಗೆ ನಿಯಮಾನುಸಾರ ಕ್ರಮವಹಿಸಲಾಗುತ್ತಿದೆ.</td>
</tr>
</table>

| | | |
|---|---|---|
| | | ➢ ಮುಂದುವರೆದು ಪಿ.ಡಿ.ಎಸ್ ಅಡಿಯಲ್ಲಿ ಅಕ್ಕಿಯ ದುರ್ಬಳಕೆಯನ್ನು ತಡೆಗಟ್ಟಲು ಭವಿಷ್ಯದಲ್ಲಿ ನವೀನ ತಂತ್ರಜ್ಞಾನ ಅಥವಾ ಕ್ರಮಗಳನ್ನು ಕೈಗೊಳ್ಳುವ ಬಗ್ಗೆ ಸಾರ್ವಜನಿಕ ವಿತರಣಾ ವ್ಯವಸ್ಥೆಯಡಿ ತಂತ್ರಜ್ಞಾನದ ಮೂಲಕ ಆಧುನೀಕರಣ ಮತ್ತು ಸುಧಾರಣೆಗಳ ಯೋಜನೆ "ಸ್ಮಾರ್ಟ್ ಪಿಡಿಎಸ್" ಉದ್ದೇಶಿತ ಸಾರ್ವಜನಿಕ ವಿತರಣಾ ವ್ಯವಸ್ಥೆಯನ್ನು ಆಧುನೀಕರಿಸಲು ಆಹಾರ ಇಲಾಖೆಯಿಂದ ತಂತ್ರಜ್ಞಾನ ಚಾಲಿತ ಕೆಲಸವು ವಿನ್ಯಾಸದ ಹಂತದಲ್ಲಿದೆ. |

ಇ-ಆನಾಸ **132 ಆರ್‌ಪಿಆರ್ 2025**

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ
ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ
ಇಲಾಖಾ ಸಚಿವರು